**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಎಂ.ಎ., ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ವಿಷಯಕ್ಕೆ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಉತ್ತರ.**

ವಿಷಯ:- ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಭಾಗದ ಉತ್ತರ ಪತ್ರಿಕೆಗಳ ಮೌಲ್ಯಮಾಪನವನ್ನು ಇದುವರೆವಿಗೂ ಬೆಂಗಳೂರಿನಲ್ಲಿ ಮಾತ್ರ ನಡೆಸಲಾಗುತ್ತಿತ್ತು. ಪ್ರಸ್ತುತ ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಪರೀಕ್ಷಾ ಕಾರ್ಯವು ಪರೀಕ್ಷಾ ಮಂಡಳಿಗೆ ವರ್ಗಾವಣೆಗೊಂಡಿರುವುದರಿಂದ ಪರೀಕ್ಷಾ ಮಂಡಳಿಯು ಪರೀಕ್ಷೆಗಳನ್ನು ನಡೆಸುವ ಸಂಪೂರ್ಣ ಜವಾಬ್ದಾರಿಯನ್ನು ಹೊಂದಿರುತ್ತದೆ. ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಪ್ರಶ್ನೆ ಪತ್ರಿಕೆಗಳ ತಯಾರಿಕೆ, ಪರೀಕ್ಷೆ ನಡೆಸುವ ಜವಾಬ್ದಾರಿ ಹಾಗೂ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಮಾಡುವ ಪ್ರಕ್ರಿಯೆ ಎಲ್ಲವೂ ಪರೀಕ್ಷಾ ಮಂಡಳಿಯ ಕಾರ್ಯವಾಗಿರುತ್ತದೆ. ದೀರ್ಘ ಕಾಲದಿಂದ ಎಸ್.ಎಸ್.ಎಲ್.ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ದ್ವಿತೀಯ ಪಿ.ಯು.ಸಿ ವಿಜ್ಞಾನ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು 4, ವಿಭಾಗಗಳಲ್ಲಿ ನಡೆಸುವುದರಿಂದ ಮೌಲ್ಯಮಾಪನ ಕಾರ್ಯಕ್ಕೆ ಬರುವ ಉಪನ್ಯಾಸಕರಿಗೆ ಸಾರಿಗೆ, ವಸತಿ ಸೌಲಭ್ಯಗಳ ತೊಂದರೆ ಕಡಿಮೆ ಆಗುತ್ತದೆ. ಅದರಲ್ಲೂ ಮುಖ್ಯವಾಗಿ ಮಹಿಳಾ ಉಪನ್ಯಾಸಕರಿಗೆ ಮೂಲಭೂತ ಸೌಕರ್ಯಗಳ ಕೊರತೆ ಇರುವುದಿಲ್ಲ ಮಂಡಳಿಗೂ ಆರ್ಥಿಕ ಹೊರೆ ಕಡಿಮೆ ಆಗುತ್ತದೆ ಹಾಗೂ ಫಲಿತಾಂಶವನ್ನು ಶೀಘ್ರವಾಗಿ ನೀಡಲು ಸಾಧ್ಯವಾಗುತ್ತದೆ. ಆದಕಾರಣ, ಪ್ರಸಕ್ತ ಶೈಕ್ಷಣಿಕ ಸಾಲಿನಿಂದಲೇ ವಿಜ್ಞಾನ ವಿಷಯಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯಗಳನ್ನು 4 ವಿಭಾಗಗಳಲ್ಲಿ ಪ್ರಾರಂಭಿಸುವಂತೆ ಒತ್ತಾಯಿಸುತ್ತೇನೆ.

ದ್ವಿತೀಯ ಪಿ.ಯು.ಸಿ ಉತ್ತರ ಪತ್ರಿಕೆಗಳ ಮೌಲ್ಯಮಾಪನ ದರ ಮತ್ತು ಇತರೆ ಭತ್ಯೆಗಳನ್ನು ಉಪನ್ಯಾಸಕರಿಗೆ ನೀಡುವಲ್ಲಿ ತುಂಬಾ ವಿಳಂಬ ಆಗುತ್ತಿದೆ. ಮೌಲ್ಯಮಾಪನದ ಕೊನೆಯ ದಿನದಂದೇ ಸದರಿಯವರಿಗೆ ನೀಡಬೇಕಾದ ಎಲ್ಲಾ ಭತ್ಯೆಗಳನ್ನು ಪಾವತಿಸಲು ಕ್ರಮ ವಹಿಸುವಂತೆ ಸಂಬಂಧಪಟ್ಟವರಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರನ್ನು ಕೋರುತ್ತೇನೆ.

* * *

**ಉತ್ತರ:-**

ದ್ವಿತೀಯ ಪಿಯುಸಿ ವಿಜ್ಞಾನ ವಿಷಯದ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ರಾಜ್ಯದ ನಾಲ್ಕು ವಿಭಾಗಗಳಲ್ಲಿ ನಡೆಸುವುದು ಅತ್ಯಂತ ಸೂಕ್ಷ್ಮತೆಗೆ ಒಳಪಟ್ಟ ವಿಚಾರವಾಗಿದ್ದು, ಗೌಪ್ಯತೆಯು ಕೊರತೆ ಉಂಟಾಗುವ ಸಂಭವವಿರುತ್ತದೆ ಮತ್ತು ಸದರಿ ವಿಷಯಗಳಿಗೆ ಮರು ಮೌಲ್ಯಮಾಪನಕ್ಕೆ ಅತೀ ಹೆಚ್ಚು ಪ್ರಸ್ತಾವಗಳು ಬರುವುದರಿಂದ, ಮರು ಮೌಲ್ಯಮಾಪನ ಪ್ರಕ್ರಿಯೆಗಳು ವಿಳಂಬವಾಗುತ್ತದೆ. ಈ ಹಿನ್ನೆಲೆಯಲ್ಲಿ ವಿಭಾಗ ಮಟ್ಟದಲ್ಲಿ ವಿಜ್ಞಾನ ವಿಷಯದ ಮೌಲ್ಯಮಾಪನ ಕಾರ್ಯವನ್ನು ನಡೆಸುವುದು ಸೂಕ್ತವಲ್ಲವೆಂದು ಅಭಿಪ್ರಾಯಿಸಿದೆ.

ಶಾಲಾ ಶಿಕ್ಷಣ ಇಲಾಖೆಯ ಪದವಿ ಪೂರ್ವ ವಿಭಾಗದಲ್ಲಿ ಮೌಲ್ಯಮಾಪನಕ್ಕೆ ಅಗತ್ಯವಿರುವ ಅನುದಾನವನ್ನು ಲಭ್ಯತೆಯ ಮೇರೆಗೆ ಮೌಲ್ಯಮಾಪನ ಕಾರ್ಯದಲ್ಲಿ ತೊಡಗಿಸಿಕೊಂಡ ಉಪನ್ಯಾಸಕರಿಗೆ ಭತ್ಯೆಯನ್ನು ಬಿಡುಗಡೆ ಮಾಡಬೇಕಾಗಿರುವುದರಿಂದ ಹಾಗೂ ಸಂಭಾವನೆ ಬಿಲ್ಲುಗಳನ್ನು ಕೆ-2 ಖಜಾನೆ ಮೂಲಕ ಸಂಬಂಧಪಟ್ಟವರ ಬ್ಯಾಂಕ್ ಖಾತೆಗೆ ನೇರವಾಗಿ ಜಮಾ ಮಾಡಲಾಗುತ್ತಿರುವುದರಿಂದ, ಮೌಲ್ಯಮಾಪನದ ಕೊನೆಯ ದಿನದಂದೇ ಭತ್ಯೆಯನ್ನು ಪಾವತಿಸುವುದು ಕಷ್ಟವಾಗುತ್ತದೆ.

**ಸಂಖ್ಯೆ:ಇಪಿ 73 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.